ಹಿರೇಕೆರೂರು ತಾಲ್ಲೂಕಿನಲ್ಲಿ ನಡೆಯುತ್ತಿರುವ ನೆದರ್‌ಲ್ಯಾಂಡ್ ಯೋಜನೆಯ ಕಾಮಗಾರಿಗಳು.

2334(2942)

ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೇಕೆರೂರ ತಾಲ್ಲೂಕಿನಲ್ಲಿ ನೆದರ್‌ಲ್ಯಾಂಡ್ ಯೋಜನೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳು ಯಾವುವು?

ಆ) ಅದರಲ್ಲಿ ಕೆಲವು ಕಾಲುವೆ ಕೆಲಸಗಳು ಕಳಪೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಕಳಪೆ ಕಾಮಗಾರಿಗಳ ಬಗ್ಗೆ ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳಲಾಗುವುದೆ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಹಿರೇಕೆರೂರು ತಾಲ್ಲೂಕಿನಲ್ಲಿ ನೆದರ್‌ಲ್ಯಾಂಡ್ ಯೋಜನೆಯಡಿಯಲ್ಲಿ 9 ಗ್ರಾಮಗಳಲ್ಲಿ ಕುಡಿಯುವ ನೀರು ಸರಬರಾಜು, ನೈರ್ಮಲ್ಯ ಹಾಗೂ ಅಂಗನವಾಡಿ ಕಟ್ಟಡ ನಿರ್ಮಾಣ ಕೆಲಸ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

ಆ) ಸದರಿ ಯೋಜನೆಯಡಿ ಹಿರೇಕೆರೂರು ತಾಲ್ಲೂಕಿನಲ್ಲಿ ಕಾಲುವೆ ಕೆಲಸಗಳನ್ನು ತೆಗೆದುಕೊಂಡಿರುವುದಿಲ್ಲ. ಆದರೆ ಚರಂಡಿ ಕೆಲಸಗಳು ನ್ಯೂನತೆ ಆಗಿರುವುದು ಪರಿವೀಕ್ಷಣೆ ಸಮಯದಲ್ಲಿ ಗಮನಿಸಲಾಗಿದೆ.

ಇ) ಪರಿವೀಕ್ಷಣೆ ಸಮಯದಲ್ಲಿ ಕಂಡುಬಂದ ನ್ಯೂನತೆಯ ಕಾಮಗಾರಿಗಳನ್ನು ಸರಿಪಡಿಸಲಾಗುತ್ತದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ ವೈದ್ಯರ ಕೊರತೆ ವಿಷಯ.

2337(3067)

ಶ್ರೀ ಬಸವರಾಜ ಮಂಡಿಮಠ ಜಿ (ಚಳ್ಳಕೆರೆ): ಮಾನ್ಯ ಆರೋಗ್ಯ ಮತ್ತು ಕುಟುಂಬ

ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಳ್ಳಕೆರೆ ತಾಲ್ಲೂಕಿನಲ್ಲಿ ಇರುವ ಆಯುರ್ವೇದಿಕ್ ಆಸ್ಪತ್ರೆಗಳ ಸಂಖ್ಯೆ ಎಷ್ಟು? ವಿವರಗಳನ್ನು ನೀಡುವುದು)

ಆ) ವೈದ್ಯರ ಕೊರತೆ ಇರುವ ಆಸ್ಪತ್ರೆಗಳು ಯಾವುವು?

ಇ) ಕೊರತೆ ಇರುವ ಕಡೆ ವೈದ್ಯರ ನೇಮಕಾತಿ ಎಂದು ಮಾಡಲಾಗುವುದು?

ಈ) ಚಳ್ಳಕೆರೆ ಪಟ್ಟಣದ ಆಯುರ್ವೇದಿಕ್ ಆಸ್ಪತ್ರೆಯ ವೈದ್ಯರ ವಿರುದ್ಧ ಅಲಕ್ಷ್ಯ, ಅಸಡ್ಡೆ, ಕರ್ತವ್ಯಲೋಪ ಮತ್ತು ಸಂಶಯ ನಡವಳಿಕೆಗಳ ಬಗೆಗಿನ ದೂರುಗಳು ಸರ್ಕಾರಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳು ಯಾವುವು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಚಳ್ಳಕೆರೆ ಪಟ್ಟಣದಲ್ಲಿ ಒಂದು ಆಯುರ್ವೇದ ಆಸ್ಪತ್ರೆಯಿದೆ ಹಾಗೂ ಚಳ್ಳಕೆರೆಯ ಕೆಳಕಂಡ 12 ಗ್ರಾಮಾಂತರ ಪ್ರದೇಶದಲ್ಲಿ ತಲಾ ಒಂದು ಆಯುರ್ವೇದ ಚಿಕಿತ್ಸಾಲಯ ಇದೆ:

1. ಸನ್ನಿಹಾಳ 2. ಘಟವರ್ತಿ 3. ಬೆಳಗೆರೆ 4. ಟಬಳಾಪುರ
5. ಟಿ.ಎನ್.ಕೋಟೆ 6. ಮಲ್ಲೂರಹಳ್ಳಿ 7. ಹಿರೇಹಳ್ಳಿ
8. ಮಹಾದೇವಪುರ 9. ಚಿಕ್ಕಮಧುರೆ 10. ಹುಲಿಕುಂಟೆ
11. ತಿಮ್ಮಪ್ಪಯ್ಯನಹಳ್ಳಿ 12. ಅಬ್ಬೇನಹಳ್ಳಿ

ಆ) ಮಲ್ಲೂರಹಳ್ಳಿ ಮತ್ತು ಮಹದೇವಪುರ ಸರ್ಕಾರಿ ಆಯರ್ವೇದ ಚಿಕಿತ್ಸಾಲಯಗಳಲ್ಲಿ ವೈದ್ಯರ ಹುದ್ದೆಗಳು ಖಾಲಿ ಇದೆ.

ಇ) ಕರ್ನಾಟಕ ಲೋಕಸೇವಾ ಆಯೋಗ ಒದಗಿಸಿರುವ ಹೆಚ್ಚುವರಿ ಪಟ್ಟಿಯಲ್ಲಿನ ಅಭ್ಯರ್ಥಿಗಳಿಂದ ಮತ್ತು ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಇಂತಹ ದೂರುಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.